**ಓ.ಎಸ್. ನಂಃ 22/2017**

**ಪಿ.ಡಬ್ಲ್ಯೂಃ 3**

**ದಿನಾಂಕ 19.03.2025 ರಂದು ಸಾಕ್ಷಿದಾರರನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ಪ್ರತಿವಾದಿಯ ಪರಃ ಶ್ರೀ ಜಿ.ಎಲ್.ಡಿ ವಕೀಲರಿಂದಃ**

1. ನಾನು 10 ನೇ ತರಗತಿಯವರೆಗೆ ವಿದ್ಯಾಭ್ಯಾಸವನ್ನು ಮಾಡಿರುತ್ತೇನೆ. ನನ್ನನ್ನು ಈ ದಿನ ನ್ಯಾಯಾಲಯಕ್ಕೆ ಸಾಕ್ಷಿ ನುಡಿಯಲು ವಾದಿ ಸಂಖ್ಯೆ 1(ಎಫ್) ರವರಾದ ಸೋಮಶೇಖರವರು ಕರೆದುಕೊಂಡು ಬಂದಿರುತ್ತಾರೆ ಎಂದರೆ ಸರಿ. ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ವಾದಿ ಸಂಖ್ಯೆ 1(ಎಫ್) ರವರು ಮಾಹಿತಿ ಕೊಟ್ಟು ಬರೆಸಿರುತ್ತಾರೆ. ವಾದಿ ಸಂಖ್ಯೆ 1(ಎಫ್) ರವರು ಹೇಳಿ ಬರೆಸಿದ ಪ್ರಮಾಣಪತ್ರಕ್ಕೆ ನಾನು ಸಹಿ ಹಾಕಿ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ ಎಂದರೆ ಸರಿ.

2. ನನಗೆ ಈ ದಾವೆಯ ಬಗ್ಗೆ ಮತ್ತು ಈ ದಾವೆಯ ವಿದ್ಯಾಮಾನಗಳ ಬಗ್ಗೆ ಯಾವುದೇ ಮಾಹಿತಿ ಇಲ್ಲದಿದ್ದರೂ ಸಹ ವಾದಿ ಸಂಖ್ಯೆ 1(ಎಫ್) ರವರ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಿಃ 16.01.2014 ರಂದು ಹಣಕಾಸಿನ ವ್ಯವಹಾರವು ನಡೆದಿರುತ್ತದೆ. ಸದರಿ ದಿನದಂದು ವಾದಿ ಕಾಳೇಗೌಡರ ಮಧ್ಯೆ ಮತ್ತು ಪ್ರತಿವಾದಿಯರ ಮಧ್ಯೆ ಯಾವುದೇ ಹಣಕಾಸಿನ ವ್ಯವಹಾರ ನಡೆಯದಿದ್ದರೂ ವಾದಿ ಕಾಳೇಗೌಡ ಮತ್ತು ವಾದಿ ಸಂಖ್ಯೆ 1(ಎಫ್) ರವರ ಮಾತುಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

3. ನನ್ನ ಸಮಕ್ಷಮದಲ್ಲಿ ವಾದಿಯಿಂದ ಪ್ರತಿವಾದಿಯಿಂದ ಹಣ ಪಡೆದಿರುತ್ತಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಯಿಂದ ಪಡೆದ ಖಾಲಿ ಛಾಪಾ ಕಾಗದವನ್ನು ದುರುಪಯೋಗಪಡಿಸಿಕೊಂಡು ಸುಳ್ಳು ದಾಖಲೆ ಸೃಷ್ಟಿಸಿ ಅದಕ್ಕೆ ಪೂರಕವಾಗುವ ಹಾಗೆ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ.1 ರ ದಾಖಲೆಯನ್ನು ಹೊರತುಪಡಿಸಿ ಬೇರೆ ಯಾವುದೇ ದಾಖಲೆಗೆ ನಾನು ಸಾಕ್ಷಿದಾರನಾಗಿ ಸಹಿ ಮಾಡಿರುವುದಿಲ್ಲ.

**ಮರುವಿಚಾರಣೆ ಇರುವುದಿಲ್ಲ.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ**
**ನ್ಯಾಯಾಧೀಶರು, ಕೆ.ಆರ್.ನಗರ.**